# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 545 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 19/07/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿಯ ಪ್ರಿವೆಂಟಿವ್ ಹೆಲ್ತ್ ಕೇರ್ ಮತ್ತು ಚೆಕ್ ಅಪ್ ಯೋಜನೆ ಅಡಿ ಕಟ್ಟಡ ಕಾರ್ಮಿಕರಿಗೆ ವಿವಿಧ ರೀತಿಯ ಆರೋಗ್ಯ ತಪಾಸಣೆಗಳು ಯಾವುವು; ಈ ಯೋಜನೆಗಳನ್ನು ವಿವಿಧ ಇಲಾಖೆಗಳಲ್ಲಿ ಯಾವ ರೀತಿ ಅನುಷ್ಠಾನಗೊಳಿಸಲಾಗುತ್ತಿದೆ; (ಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆಯಡಿ ನೋಂದಾಯಿತ ಕಾರ್ಮಿಕರು ಮತ್ತು ಅವರ ಅವಲಂಭಿತರಿಗೆ ನಡೆಸಲಾಗುವ ಆರೋಗ್ಯ ತಪಾಸಣೆಗಳ ವಿವರವನ್ನು **ಅನುಬಂಧದಲ್ಲಿ ನೀಡಿದೆ**.<br><br>ಮಂಡಳಿಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇ-ಟೆಂಡರ್ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆ/ ಸಂಸ್ಥೆಗಳನ್ನು ಎಂಪ್ಯಾನಲ್ ಮಾಡಿಕೊಂಡು, ತದನಂತರ ಉಪವಿಭಾಗವಾರು ಮರು ಇ-ಟೆಂಡರ್ ಕರೆದು ಎಂಪ್ಯಾನಲ್ ಆಗಿರುವ ಸಂಸ್ಥೆಗಳ ಪೈಕಿ ಪ್ರತಿ ಉಪವಿಭಾಗಕ್ಕೆ ಒಂದೊಂದು ಸಂಸ್ಥೆಯನ್ನು ಆಯ್ಕೆ ಮಾಡುವ ಮೂಲಕ ಅನುಷ್ಠಾನಗೊಳಿಸಲಾಗಿರುತ್ತದೆ. |
| ಆ) | ರಾಜ್ಯಾದಾದ್ಯಂತ ಈ ಯೋಜನೆಗಳನ್ನು ಪ್ರಚುರಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ರಾಜ್ಯಾದ್ಯಂತ ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆಯ ಬಗ್ಗೆ ಅರಿವು ಮೂಡಿಸಲು ಮತ್ತು ವೈದ್ಯಕೀಯ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವ ಅವಶ್ಯಕತೆ ಬಗ್ಗೆ ಮಂಡಳಿಯ ವತಿಯಿಂದ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲಾಗಿರುತ್ತದೆ. ಈ ಐಇಸಿ ಚಟುವಟಿಕೆಗಳಡಿ ಕರಪತ್ರಗಳ ಹಂಚಿಕೆ, ಆಟೋ ಪ್ರಚಾರ, ಸಾಮಾಜಿಕ ಮಾಧ್ಯಮಗಳ ಮೂಲಕ ಪ್ರಚಾರ, ಸಾಕ್ಷ್ಯ ಚಿತ್ರ ನಿರ್ಮಾಣ ಮೊದಲಾದವುಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ. ಅದೇ ರೀತಿ ಕ್ಷೇತ್ರಮಟ್ಟದಲ್ಲಿ ಯೋಜನೆಯನ್ನು ಅನುಷ್ಠಾನ ಮಾಡಲು ಕಾರ್ಯಾದೇಶ ಪಡೆಯಲಾದ ಸಂಸ್ಥೆಯು ಕಡ್ಡಾಯವಾಗಿ ಯೋಜನೆಯ ಪ್ರಾರಂಭಕ್ಕೂ ಮುಂಚೆ ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ. |

| | | |
|---|---|---|
| ಇ) | ರಾಜ್ಯದ ಚಿತ್ರದುರ್ಗ ಜಿಲ್ಲೆ ಒಳಗೊಂಡಂತೆ ವಿವಿಧ ಜಿಲ್ಲೆಗಳಲ್ಲಿ ಆರೋಗ್ಯ ತಪಾಸಣೆಯಲ್ಲಿ ಅಕ್ರಮ ಮತ್ತು ಅವ್ಯವಹಾರ ಎಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಚಿತ್ರದುರ್ಗ ಜಿಲ್ಲೆ ಒಳಗೊಂಡಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಂಡಳಿಯಿಂದ ನಡೆಸಲಾಗುತ್ತಿರುವ ಆರೋಗ್ಯ ತಪಾಸಣೆಯನ್ನು ಪರಿಣಾಮಕಾರಿಯಾಗಿ ಹಾಗೂ ಸಮಗ್ರವಾಗಿ ನಡೆಸಲು ಮಂಡಳಿಯು ಕ್ರಮ ಕೈಗೊಂಡಿರುತ್ತದೆ.<br><br>ತಪಾಸಣಾ ಶಿಬಿರ ನಡೆಯುವ ಪೂರ್ವದಲ್ಲಿ ದಿನಾಂಕ, ಸ್ಥಳ ಮತ್ತು ಸಮಯದ ಮಾಹಿತಿಯನ್ನು ಕಾರ್ಮಿಕರಿಗೆ ತಿಳಿಸಲಾಗುವುದು.<br><br>ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಗಳು ನಿಗದಿಪಡಿಸಿರುವ ಮಾನದಂಡಗಳನ್ವಯ ನಡೆಸಲಾಗುತ್ತದೆ. ವೈದ್ಯಕೀಯ ಪರೀಕ್ಷೆಯ ಮಾದರಿಗಳನ್ನು ತಂತ್ರಾಂಶದ ಮೂಲಕ ವಿಶ್ಲೇಷಿಸಿ, ಫಲಾನುಭವಿಗಳಿಗೆ ಮೊಬೈಲ್ ವಾಟ್ಸ್ ಆಪ್ ಮೂಲಕ ವರದಿಯನ್ನು ನೀಡಲಾಗುತ್ತದೆ ಹಾಗೂ ತದನಂತರ ವರದಿಯ ಪ್ರತಿಯನ್ನು ನೀಡಲಾಗುತ್ತದೆ. ಫಲಾನುಭವಿಗಳಿಗೆ ಯಾವುದೇ ವೈದ್ಯಕೀಯ ಸಮಸ್ಯೆಗಳಿದ್ದಲ್ಲಿ, ಉಚಿತ ವೈದ್ಯರ ಸಮಾಲೋಚನೆಯೊಂದಿಗೆ ವರದಿಗಳನ್ನು ನೀಡಿ ಪರಿಹಾರವನ್ನು ಕೂಡ ಸೂಚಿಸಲಾಗುತ್ತದೆ.<br><br>ಮಂಡಳಿಯ ಸಂಚಾರಿ ಆರೋಗ್ಯ ಘಟಕಗಳಲ್ಲಿ ಇಂತಹ ಕಾರ್ಮಿಕರಿಗೆ ಚಿಕಿತ್ಸೆ ಪಡೆಯಲು ಅವಕಾಶವಿರುತ್ತದೆ. ಇದಲ್ಲದೇ, ಮಂಡಳಿಯ ಚಾಲ್ತಿ ನಿಯಮಗಳನ್ವಯ ರೂ.2.00 ಲಕ್ಷಗಳವರೆಗೆ ವೈದ್ಯಕೀಯ ವೆಚ್ಚದ ಮರುಪಾವತಿಗೆ ಕೂಡ ಅವಕಾಶವಿರುತ್ತದೆ. ಎಲ್ಲಾ ಪರೀಕ್ಷೆಗಳ ವರದಿಗಳ ಹಾರ್ಡ್ ಮತ್ತು ಸಾಫ್ಟ್ ಕಾಪಿಯನ್ನು ಕೂಡ ನಿರ್ವಹಿಸಲಾಗುತ್ತಿದೆ. |

**ಕಾಇ 292 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ ತಿಪ್ಪೇಸ್ವಾಮಿ
(ನಾಮ ನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 545

ನೋಂದಾಯಿತ ಕಾರ್ಮಿಕರು ಮತ್ತು ಅವರ ಅವಲಂಭಿತರಿಗೆ ನಡೆಸಲಾಗುವ ಆರೋಗ್ಯ ತಪಾಸಣೆಗಳ ವಿವರ;

| Sl. No. | Particulars |
|---|---|
| 1 | Doctor consultation – Detailed physical Test |
| 2 | Lung Function Test |
| 3 | Audiometry Screen Test |
| 4 | Vision Screening Test |
| 5 | CBC test |
| 6 | ESR |
| 7 | HBALC |
| 8 | Liver Function Test |
| 9 | Renal (kidney) function tests |
| 10 | LIPID Profile |
| 11 | Malaria Parasite |
| 12 | Urine Routine |
| 13 | T3 T4 TSH |
| 14 | Serum Iron |
| 15 | Serum Magnesium |
| 16 | GGTP |
| 17 | CRP Quantitative |
| 18 | Serum Ferritin |
| 19 | **Infection Disease Panel** |
| | HIV |
| | Hepatitis B |
| | Hepatitis C |
| | VDRL |
| 20 | Blood Grouping |